# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 147 (1428) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ |
| ಉತ್ತರಿಸುವ ದಿನಾಂಕ | : | 30-12-2022 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಇಲಾಖೆ ಅಡಿಯಲ್ಲಿ ನಡೆಯುತ್ತಿರುವ ವಸತಿ ನಿಲಯ ಆಶ್ರಮ, ಮೊರಾರ್ಜಿ ದೇಸಾಯಿ ವಸತಿ ನಿಲಯ, ಅಂಬೇಡ್ಕರ್ ವಸತಿ ನಿಲಯಗಳೆಷ್ಟು; (ಇಲಾಖೆವಾರು ವಿವರ ನೀಡುವುದು)</td><td>ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಬೀದರ್ ಜಿಲ್ಲೆಯಲ್ಲಿ 06 ಸರ್ಕಾರಿ ವಸತಿ ಶಾಲೆ ಹಾಗೂ 42 ಮೆಟ್ರಿಕ್ ಪೂರ್ವ ಮತ್ತು 19 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದೆ.<br><table><tr><th>ಕ್ರ. ಸಂ</th><th>ನಿಲಯಗಳ ವಿವರ</th><th>ನಿಲಯಗಳ ಸಂಖ್ಯೆ</th></tr><tr><td>01</td><td>ಸರ್ಕಾರಿ ವಸತಿ ಶಾಲೆಗಳು (1 ರಿಂದ 5ನೇ ತರಗತಿ)</td><td>06</td></tr><tr><td>02</td><td>ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು</td><td>42</td></tr><tr><td>03</td><td>ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳು</td><td>19</td></tr><tr><td></td><td>ಒಟ್ಟು</td><td>67</td></tr></table><br>ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಇಲಾಖೆಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ನಡೆಯುತ್ತಿರುವ ವಸತಿ ಶಾಲೆಗಳ ವಿವರಗಳನ್ನು ಅನುಬಂಧ-01 ರಲ್ಲಿ ನೀಡಿದೆ.</td></tr>
<tr><td>ಆ)</td><td>ಈ ವಸತಿ ನಿಲಯಗಳು ಎರಡು ಇಲಾಖೆಗಳ ವ್ಯಾಪ್ತಿಗೆ ಬರಲಿದ್ದು, ಅವುಗಳ ಸಿಬ್ಬಂದಿಯ ವಿವರ ನೀಡುವುದು;</td><td>ಸಮಾಜ ಕಲ್ಯಾಣ ಇಲಾಖೆಯಿಂದ ನಿರ್ವಹಿಸಲಾಗುತ್ತಿರುವ ಸರ್ಕಾರಿ ವಸತಿ ಶಾಲೆಗಳಲ್ಲಿ 24 ಶಿಕ್ಷಕರು, 61 ಮೇಲ್ವಿಚಾರಕರು, 179 ಅಡುಗೆಯವರು, 109 ಅಡುಗೆ ಸಹಾಯಕರು ಹಾಗೂ 67 ರಾತ್ರಿ ಕಾವಲುಗಾರರು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.<br><br>ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಅಡಿಯಲ್ಲಿ ಬರುವ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯ ವಿವರಗಳನ್ನು ಅನುಬಂಧ-02 ರಲ್ಲಿ ನೀಡಿದೆ.</td></tr>
</table>

<table>
<tr>
<td>ಇ)</td>
<td>ಈ ಇಲಾಖೆಗಳ ವಸತಿ ನಿಲಯಗಳಲ್ಲಿ ಏನಾದರೂ ವ್ಯತ್ಯಾಸವಿದ್ದಲ್ಲಿ, ವಿವರ ನೀಡುವುದು;</td>
<td>ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಮಾಸಿಕ ಭೋಜನಾ ವೆಚ್ಚದ ವಿವರಗಳು ಕೆಳಕಂಡಂತಿವೆ.<br>
<table>
<tr><th>ಕ್ರ.ಸಂ</th><th>ನಿಲಯಗಳ ವಿವರ</th><th>ಮಾಸಿಕ ಭೋಜನಾ ವೆಚ್ಚದ ದರ</th></tr>
<tr><td>01</td><td>ಸರ್ಕಾರಿ ವಸತಿ ಶಾಲೆಗಳು (1 ರಿಂದ 5ನೇ ತರಗತಿ)</td><td>ರೂ. 1450/-</td></tr>
<tr><td>02</td><td>ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು</td><td>ರೂ. 1650/-</td></tr>
<tr><td>03</td><td>ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳು</td><td>ರೂ. 1750/-</td></tr>
</table>
<br>ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಿದ್ಯಾರ್ಥಿನಿಲಯಗಳಲ್ಲಿ ಮಾಸಿಕ ನಿರ್ವಹಣಾ ವೆಚ್ಚದ ದರಗಳಲ್ಲಿ ಯಾವುದೇ ವ್ಯತ್ಯಾಸವಿರುವುದಿಲ್ಲ.</td>
</tr>
<tr>
<td>ಈ)</td>
<td>ಹಿಂದುಳಿದ ವರ್ಗದ ವಿದ್ಯಾರ್ಥಿನಿಲಯಗಳಲ್ಲಿ ಮೂಲ ಸೌಲಭ್ಯ ಹಾಗೂ ವಸತಿ ವ್ಯವಸ್ಥೆಗಳು ಸಮರ್ಪಕವಾಗಿದ್ದು, ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುವ ವಸತಿ ನಿಲಯಗಳ ಬಗ್ಗೆ ಸರ್ಕಾರ ನಿರ್ಲಕ್ಷ್ಯ ಭಾವನೆ ತಳೆದಿರುವುದು ಸರಿಯೇ?</td>
<td>ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಸಂಬಂಧ ಸರ್ಕಾರದಿಂದ ಯಾವುದೇ ನಿರ್ಲಕ್ಷ್ಯ ವಹಿಸಿರುವುದಿಲ್ಲ.<br><br>2020-21ನೇ ಸಾಲಿನಲ್ಲಿ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸುವ ಸಂಬಂಧ ಅಗತ್ಯವಿರುವ ಸಾಮಗ್ರಿಗಳಾದ ಯುಪಿಎಸ್, ವಾಟರ್ ಪ್ಯೂರಿಫೈರ್, ಲೈಬ್ರರಿ ಬುಕ್ಸ್, ಕ್ರೀಡಾ ಸಾಮಗ್ರಿಗಳು, ಇನ್ಸಿನೇಟರ್, ಬೆಂಕಿ ನಂದಿಸುವ ಉಪಕರಣ, ಕಂಪ್ಯೂಟರ್ ಲ್ಯಾಬ್‌ಗಳಿಗೆ ಕಂಪ್ಯೂಟರ್ ಗಳು, ಪಾತ್ರೆ ಪರಿಕರಗಳು ಹಾಗೂ ಇತರೆ ತುರ್ತು ಸಾಮಗ್ರಿಗಳ ಖರೀದಿಗಾಗಿ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ರೂ.21.76 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ ಸದರಿ ಅನುದಾನದಲ್ಲಿ ಬೀದರ್ ಜಿಲ್ಲೆಗೆ ರೂ.73.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.<br><br>ಅಲ್ಲದೇ ರಾಜ್ಯವಲಯದಿಂದ ವಿದ್ಯಾರ್ಥಿ ನಿಲಯಗಳಿಗೆ ಅಗತ್ಯವಿರುವ ಸಾಮಗ್ರಿಗಳಾದ ಟೂ ಟಿಯರ್ ಕಾಟ್, ಸೋಲಾರ್ ವಾಟರ್ ಹೀಟರ್, ಡೈನಿಂಗ್ ಟೇಬಲ್, ಕಾಯರ್ ಮ್ಯಾಟ್ರಸ್ ಮತ್ತು ಪಿಲ್ಲೋ, ಸಿಸಿಟಿವಿ ಮತ್ತು ಶಾಲಾ ಬ್ಯಾಗ್‌ಗಳನ್ನು ಸರಬರಾಜು ಮಾಡಲಾಗಿರುತ್ತದೆ.</td>
</tr>
</table>

ಸಕಇ 803 ಎಸ್‌ಎಲ್ ಪಿ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು